ಜೆಎಸ್‌ಎಸ್ ಮಹಾವಿದ್ಯಾಪೀಠ
ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

ಶಿವಾನುಭವ ದಾಸೋಹ–343

28 ನವೆಂಬರ್ 2026 * ಶನಿವಾರ * ಸಂಜೆ 6.00

ಕೆಎಸ್‌ಎಸ್ ಸಂಸ್ಕೃತ ಪಾಠಶಾಲೆ, ವಾಣಿವಿಲಾಸ ರಸ್ತೆ, ಮೈಸೂರು

ದಿವ್ಯಾಶೀರ್ವಾದ

ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಸುತ್ತೂರು ಶ್ರೀಕ್ಷೇತ್ರ

ಅಧ್ಯಕ್ಷತೆ

ಶ್ರೀ ಎಸ್. ಶಿವಮೂರ್ತಿ ಕಾನ್ಯ

ಮಾಜಿ ಜಿಲ್ಲಾಧ್ಯಕ್ಷರು, ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾ

ಉಪನ್ಯಾಸ

ಡಾ. ರಾಜಶೇಖರ ಜಮದಂಡಿ

ಪ್ರಾಧ್ಯಾಪಕರು, ಶ್ರೀನಿವಾಸ ವಿಶ್ವವಿದ್ಯಾಲಯ, ಮಂಗಳೂರು

ವಿಷಯ : ಶರಣರ ಜೀವನ

ವಚನ ಗಾಯನ

ಕು. ಎನ್. ಚೂಡಾಮಣಿ

ಮೈಸೂರು

ಪ್ರಾಯೋಜಕರು

ಶ್ರೀಮತಿ ರೂಪ ಮತ್ತು ಶ್ರೀ ರಾಜು

ಎಂ.ಎನ್.ಆರ್. ಕೇಟರರ್ಸ್

ಮಲ್ಲರಾಜಯ್ಯನಹುಂಡಿ, ನಂಜನಗೂಡು ತಾ.

ತಮಗೆಲ್ಲ ಆದರದ ಸ್ವಾಗತ

ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮ ಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ, ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿಯಂಥ ಸಂಸ್ಥೆಗಳ ಮೂಲಕ ಧರ್ಮ ದಾಸೋಹವನ್ನು ಪ್ರಾರಂಭಿಸಿದರು. 1986ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ದತ್ತಿಯ ವತಿಯಿಂದ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.5.1996ರಂದು 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

ಶ್ರೀ ಎಸ್. ಶಿವಮೂರ್ತಿ ಕಾನ್ಯರವರು ಮೈಸೂರು ತಾಲ್ಲೂಕಿನ ಚಿಕ್ಕಕಾನ್ಯ ಗ್ರಾಮದವರು. ಮೂಲತಃ ಕೃಷಿಕರು, ಶ್ರೀ ಮಲೆ ಮಹದೇಶ್ವರ ಜಯಂತಿ ಸಮಿತಿಯ ಅಧ್ಯಕ್ಷರಾಗಿ ಹಾಗೂ ಶ್ರೀ ಮಲೆ ಮಹದೇಶ್ವರ ಪತ್ತಿನ ಸಹಕಾರ ಸಂಘದ ನಿರ್ದೇಶಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಪ್ರಥಮ ದರ್ಜೆ ಗುತ್ತಿಗೆದಾರರಾಗಿಯೂ ಹೆಸರು ಮಾಡಿದ್ದಾರೆ. ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾದ ಮೈಸೂರು ಜಿಲ್ಲಾ ಘಟಕದ ಮಾಜಿ ಅಧ್ಯಕ್ಷರು. ಬಸವ ಬಳಗಗಳ ಒಕ್ಕೂಟದ ಮಾಜಿ ಅಧ್ಯಕ್ಷರು. ವಿವಿಧ ಸಂಘ ಸಂಸ್ಥೆಗಳಲ್ಲಿ ಜವಾಬ್ದಾರಿಯುತ ಸ್ಥಾನಗಳಲ್ಲಿರುವರು. ಸಮಾಜ ಸೇವಾ ಕಾರ್ಯಗಳಲ್ಲಿ ಹಾಗೂ ಮಠಮಾನ್ಯಗಳ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುತ್ತಾರೆ.

ಡಾ. ರಾಜಶೇಖರ ಜಮದಂಡಿಯವರು ಸಾಹಿತಿಗಳು ಹಾಗೂ ಸಂಶೋಧಕರು. ಮೈಸೂರಿನ ಶಾಸ್ತ್ರೀಯ ಕನ್ನಡ ಅಧ್ಯಯನ ಅತ್ಯುನ್ನತ ಕೇಂದ್ರದ ಹಿರಿಯ ಸಂಶೋಧಕರಾಗಿದ್ದರು. ಜೆಎಸ್ಎಸ್ ಕಾಲೇಜು ಹಾಗೂ ಇತರ ಕಾಲೇಜುಗಳಲ್ಲಿ 20ಕ್ಕೂ ಹೆಚ್ಚು ವರ್ಷ ಕಾಲ ಸಹಾಯಕ ಪ್ರಾಧ್ಯಾಪಕರಾಗಿ ಕಾರ್ಯ ನಿರ್ವಹಿಸಿರುವರು. 'ವಚನಾವಲೋಕನ', 'ಜಾನಪದ ಸಂಪತ್ತು', 'ಚಾಮರಾಜನಗರ ಜಿಲ್ಲೆಯ ಜಾತ್ರೆ ಮತ್ತು ಹಬ್ಬಗಳು' ಸೇರಿದಂತೆ ಹಲವಾರು ಮೌಲಿಕ ಕೃತಿಗಳನ್ನು ರಚಿಸಿದ್ದಾರೆ. ಹಲವಾರು ಸಂಶೋಧನಾ ಯೋಜನೆಗಳ ಸದಸ್ಯರು, ಯೋಜನಾ ಸಹಾಯಕರಾಗಿ ಸೇವೆ ಸಲ್ಲಿಸಿರುವರು. ವಿವಿಧ ನಿಯತಕಾಲಿಕೆಗಳಲ್ಲಿ ಇವರ ಸಂಶೋಧನಾ ಲೇಖನಗಳು ಪ್ರಕಟವಾಗಿವೆ. ಹಲವಾರು ಸಂಘ–ಸಂಸ್ಥೆಗಳ ಪ್ರಶಸ್ತಿಗಳಿಗೆ ಪಾತ್ರರಾಗಿದ್ದಾರೆ.

ಶ್ರೀ ರಾಜುರವರು ಮಲ್ಲರಾಜಯ್ಯನಹುಂಡಿ ಗ್ರಾಮದವರು, ರೈತಾಪಿ ಕುಟುಂಬದಿಂದ ಬಂದವರು. ಎಂ.ಎನ್.ಆರ್. ಕ್ಯಾಟರಿಂಗ್ ಸರ್ವೀಸನ್ನು ನಡೆಸುತ್ತಿದ್ದಾರೆ. ಶ್ರೀಮತಿ ರೂಪರವರು ಇವರ ಧರ್ಮಪತ್ನಿ. ಕು. ಎಂ.ಆರ್. ಸಂಜನ ಮತ್ತು ಕು. ಎಂ.ಆರ್. ಸಿಂಚನ ಇಬ್ಬರೂ ಸುಪುತ್ರಿಯರು. ಮೊದಲ ಮಗಳು ಎಂಸಿಎ ವ್ಯಾಸಂಗವನ್ನು ಹಿಂದೂಸ್ಥಾನ್ ಕಾಲೇಜಿನಲ್ಲಿ ಹಾಗೂ ಎರಡನೇ ಮಗಳು ಬಿ.ಇ. ವ್ಯಾಸಂಗವನ್ನು ಎಸ್ಜೆಸಿಇ ಕಾಲೇಜಿನಲ್ಲಿ ಮಾಡುತ್ತಿದ್ದಾರೆ. ಕ್ಯಾಟರಿಂಗ್ ನಡೆಸುವುದರ ಮೂಲಕ ಹಲವಾರು ಯುವಕರಿಗೆ ನೆರವಾಗಿದ್ದಾರೆ. ಸಾಮಾಜಿಕ, ಧಾರ್ಮಿಕ ಕಾಳಜಿಯುಳ್ಳ ಶ್ರೀಯುತರು ಕಾರ್ಯಕ್ರಮದ ಪ್ರಾಯೋಜಕರಾಗಿದ್ದಾರೆ.